ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಮೂರನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 18ನೇ ಫೆಬ್ರವರಿ, 2014
(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ಪ್ರಶ್ನೋತ್ತರ

ಅ) **ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಏಳನೇ ಪಟ್ಟಿ**

ಇ) **ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಏಳನೇ ಪಟ್ಟಿ**

2. ಅರ್ಜಿಗಳನ್ನೊಪ್ಪಿಸುವುದು

1. **ಶ್ರೀ ಎನ್.ಹೆಚ್. ಶಿವಶಂಕರರೆಡ್ಡಿ, (ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಅರ್ಜಿಗಳ ಸಮಿತಿ) ಅವರು:-**

   ಗೌರಿಬಿದನೂರು ಟೌನ್ ಹೊರವಲಯದಲ್ಲಿ ಸರ್ಕಾರದವರು ಬೈಪಾಸ್ ರಸ್ತೆ ನಿರ್ಮಿಸಲು ವಶಪಡಿಸಿಕೊಂಡಿರುವ ಜಮೀನುಗಳಿಗೆ ಕೋರ್ಟ ಆದೇಶದಂತೆ ಹೆಚ್ಚುವರಿ ಹಣ ಬಿಡುಗಡೆ ಮಾಡುವ ಬಗೆಗಿನ ಅರ್ಜಿಯನ್ನೊಪ್ಪಿಸುವುದು.

2. **ಶ್ರೀ ಯಶವಂತರಾಯಗೌಡ ವಿ. ಪಾಟೀಲ್ (ಸದಸ್ಯರು) ಅವರು:-**

   ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಎನ್.ಆರ್.ಹೆಚ್.ಎಂ. ಯೋಜನೆ ಅಡಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ 650 ಗುತ್ತಿಗೆ ಆಯುಷ್ ವೈದ್ಯಾಧಿಕಾರಿಗಳ ವೇತನ ತಾರತಮ್ಯ ನಿವಾರಿಸುವ ಬಗೆಗಿನ ಅರ್ಜಿಯನ್ನೊಪ್ಪಿಸುವುದು.

3. ವಿತ್ತೀಯ ಕಾರ್ಯಕಲಾಪಗಳು

2014-15ನೇ ಸಾಲಿನ ಆಯವ್ಯಯದ ಮೇಲೆ ಮುಂದುವರೆದ ಸಾಮಾನ್ಯ ಚರ್ಚೆ.

4. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಹೆಚ್.ಸಿ. ಬಾಲಕೃಷ್ಣ ಅವರು ಮಾಗಡಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ರಾಮನಗರ ತಾಲ್ಲೂಕು ಬಿಡದಿ ಹೋಬಳಿಯ ಎಲ್ಲಾ ಪಂಚಾಯತಿಗಳ ಗ್ರಾಮಗಳಿಗೆ ನಿರಂತರ ವಿದ್ಯುತ್ ಸರಬರಾಜು ಮಾಡುವ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.,

2. ಶ್ರೀ ಮಾಲಿಕಯ್ಯ ವಿ. ಗುತ್ತೇದಾರ ಅವರು ಗುಲಬರ್ಗಾ ಜಿಲ್ಲೆಯಲ್ಲಿ ಬಹಳಷ್ಟು ಸಹಕಾರ ಸಂಘಗಳು, ಡಿ.ಸಿ.ಸಿ ಬ್ಯಾಂಕ್‌ಗಳು ಹಾಗೂ ತಾಲ್ಲೂಕುಗಳ ವ್ಯಾಪ್ತಿಯಲ್ಲಿ ಬರುವ ಸಹಕಾರ ಸಂಘಗಳ ಸೊಸೈಟಿಯಲ್ಲಿ ಕೆಲವೇ ವ್ಯಕ್ತಿಗಳಿಗೆ ಸಾಲ ಸೌಲಭ್ಯ ದೊರೆಯುತ್ತಿದ್ದು ಇತರೆ ಬಡ ವರ್ಗದ ರೈತರಿಗೆ ಸಾಲ ಸೌಲಭ್ಯಗಳು ದೊರೆಯದಿರುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

3. ಶ್ರೀ ತುಕಾರಂ ಈ ಅವರು ಬಳ್ಳಾರಿ ಜಿಲ್ಲೆಯ ಸಂಡೂರು ತಾಲ್ಲೂಕಿನ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ ಸ್ನಾತಕೋತ್ತರ ಕೇಂದ್ರ, ನಂದೀಹಳ್ಳಿ ಇಲ್ಲಿ ಕೆಲಸ ನಿರ್ವಹಿಸುತ್ತಿರುವ 13 ಶಿಕ್ಷಕರು ಮತ್ತು 64 ಶಿಕ್ಷಕೇತರ ಸಿಬ್ಬಂದಿಯವರಿಗೆ ನಿವೃತ್ತಿ ವೇತನ, ವಿತ್ತೀಯ ಸೌಲಭ್ಯ ಹಾಗೂ ಇನ್ನಿತರೆ ಸೌಲಭ್ಯಗಳನ್ನು ನೀಡದೆ ತೊಂದರೆಯುಂಟಾಗಿರುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

4. ಶ್ರೀ ಡಿ. ನಾಗರಾಜಯ್ಯ ಅವರು ನಬಾರ್ಡ್ ಯೋಜನೆಯಡಿ ಸಣ್ಣ ನೀರಾವರಿ ಇಲಾಖೆಗೆ ಸಮರ್ಪಕವಾಗಿ ಹಣ ಬಿಡುಗಡೆಯಾಗಿದ್ದರೂ ಈ ಹಣವನ್ನು ವಿಧಾನಸಭಾ ಕ್ಷೇತ್ರವಾರು ಸರಿಯಾಗಿ ವಿತರಣೆಯಾಗದಿರುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

5. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಜಗದೀಶ್ ಶೆಟ್ಟರ, ಬಸವರಾಜ ಬೊಮ್ಮಾಯಿ, ವಿಶ್ವೇಶ್ವರ ಹೆಗಡೆ ಕಾಗೇರಿ, ಕೆ.ಜಿ.ಬೋಪಯ್ಯ, ಅರವಿಂದ ಲಿಂಬಾವಳಿ ಹಾಗೂ ಇತರರು ರಾಜ್ಯದ 15 ಜಿಲ್ಲೆಗಳ 130ಕ್ಕೂ ಹೆಚ್ಚು ತಾಲ್ಲೂಕುಗಳಲ್ಲಿ ಮಳೆಯ ಕೊರತೆಯಿಂದ ಬರಗಾಲ ಉಂಟಾಗಿರುವ ವಿಷಯದ ಬಗ್ಗೆ ಚರ್ಚೆ.

   ಹಾಗೂ

   ಶ್ರೀ ಹೆಚ್.ಡಿ. ಕುಮಾರಸ್ವಾಮಿ, ಶ್ರೀ ಎನ್. ಚಲುವರಾಯಸ್ವಾಮಿ, ಶ್ರೀ ಹೆಚ್.ಡಿ. ರೇವಣ್ಣ, ಶ್ರೀ ಹೆಚ್.ಕೆ. ಕುಮಾರಸ್ವಾಮಿ, ಶ್ರೀ ಕೆ.ಎಂ. ಶಿವಲಿಂಗೇಗೌಡ ಹಾಗೂ ಇತರರು ರಾಜ್ಯದಲ್ಲಿ ಅತೀವ ಬರಗಾಲದಿಂದ ಉಂಟಾಗಿರುವ ಕುಡಿಯುವ ನೀರಿನ ಅಭಾವವನ್ನು ನೀಗಿಸಲು ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 3 ಕೋಟಿ ರೂ.ಗಳನ್ನು ಮಂಜೂರು ಮಾಡುವ ವಿಷಯದ ಬಗ್ಗೆ ಚರ್ಚೆ.

2. ಶ್ರೀಯುತರುಗಳಾದ ಎ.ಎಸ್. ಪಾಟೀಲ್(ನಡಹಳ್ಳಿ), ವಿಜಯಾನಂದ ಎಸ್ ಕಾಶಪ್ಪನವರ, ಗೋವಿಂದ ಎಂ. ಕಾರಜೋಳ, ಅವರುಗಳು ಅವಳಿ ಜಿಲ್ಲೆಗೆ ನೀರಾವರಿ ಯೋಜನೆಗಳ ನೀರಿನ ಹಂಚಿಕೆಯನ್ನು ಬಚಾವತ್ ತೀರ್ಪಿನಡಿಯಲ್ಲಿ ಹಂಚಿಕೆಯಾದ 173 ಟಿ.ಎಂ.ಸಿ ನೀರಿನಲ್ಲಿ ಕನಿಷ್ಠ 105 ಟಿ.ಎಂ.ಸಿ ನೀರನ್ನು ಮರುಹಂಚಿಕೆ ಮಾಡುವ ವಿಷಯದ ಬಗ್ಗೆ ಚರ್ಚೆ.

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N